ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಸರ್ಕಾರದ ಆದೇಶಗಳನ್ನು ಉಲ್ಲಂಘಿಸಿ ನೇಮಕಾತಿ ಮಾಡಿರುವ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

167 (298) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ಕೃಷಿ ವಿಶ್ವವಿದ್ಯಾಲಯದಲ್ಲಿ ಸಹಾಯಕ ಪ್ರಾಧ್ಯಾಪಕರ ನೇರ ನೇಮಕಾತಿಯಲ್ಲಿ ಸರ್ಕಾರ ಆದೇಶಗಳನ್ನು ಉಲ್ಲಂಘಿಸಿ ನೇಮಕಾತಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ದಿ:03.03.2018ರಲ್ಲಿ ಸರ್ಕಾರ ಶ್ರೀ ಮನೀಶ್ ಮೌದಿಲ್ ರವರ ಅಧ್ಯಕ್ಷತೆಯಲ್ಲಿ ರಚಿಸಿದ ಸಮಿತಿಯು ಸರ್ಕಾರಕ್ಕೆ ವರದಿ ಸಲ್ಲಿಸಿದೆಯೇ ; ಪ್ರಸ್ತುತ ಅದು ಯಾವ ಹಂತದಲ್ಲಿದೆ ;

(ಇ) ನೇಮಕಾತಿಯಲ್ಲಿ ಅಕ್ರಮವೆಸಗಿರುವವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಅಕ್ರಮವೆಸಗಿದ್ದರೆ ನೇಮಕಾತಿ ಆದೇಶ ರದ್ದು ಮಾಡಿ ಹೊಸದಾಗಿ ನೇಮಕಾತಿ ಮಾಡಿಕೊಳ್ಳುವ ಬಗ್ಗೆ ಸರ್ಕಾರ ಚಿಂತಿಸಿದೆಯೇ?